6:31 PM ··· 48.3KB/s 65

New Docume...

# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ

"ಸಾರಿಗೆ ಭವನ" ಕೇಂದ್ರ ಕಛೇರಿ, ಕೆ.ಹೆಚ್.ರಸ್ತೆ, ಶಾಂತಿ ನಗರ, ಬೆಂಗಳೂರು-560 027.
ಸಂಚಾರ (ವಾಣಿಜ್ಯ) ಇಲಾಖೆ.

ಸಂ:ಕರಾಸಾ:ಕೇಕ:ಸಂ:ಸಿ2:1507(ಭಾಗ-7): 1504:2020-21 ದಿನಾಂಕ: 01.01.2021

## ಸುತ್ತೋಲೆ

ವಿಷಯ: ವಿದ್ಯಾರ್ಥಿ ಬಸ್ ಪಾಸ್ ಮಾನ್ಯತೆ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಯು ಎನ್ ಇ 2020, ಬೆಂಗಳೂರು ದಿನಾಂಕ: 09.11.2020.
2. ಸುತ್ತೋಲೆ-1579/2020 ದಿನಾಂಕ: 13.11.2020.
3. ಸಂ:ಕರಾಸಾ:ಕೇಕ:ಸಂ:ಸಿ2:1507(ಭಾಗ-7):1353:2020-21 ದಿನಾಂಕ: 10.12.2020.
4. ಸೂಕ್ತಾಧಿಕಾರಿಗಳ ಆದೇಶದ ದಿನಾಂಕ: 01.01.2021

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪದವಿ ಹಾಗೂ ಇತರ ವರ್ಗದ ವಿದ್ಯಾರ್ಥಿಗಳಿಗೆ 2020-21ನೇ ಶೈಕ್ಷಣಿಕ ವರ್ಷದ ಚಟುವಟಿಕೆಗಳನ್ನು ದಿನಾಂಕ: 17.11.2020 ರಿಂದ ಪ್ರಾರಂಭಿಸಲು ಉಲ್ಲೇಖ-1ರ ಸರ್ಕಾರದ ಆದೇಶದಲ್ಲಿ ಸೂಚಿಸಿದ್ದರಿಂದ, ಉಲ್ಲೇಖಿತ-3 ರ ಸುತ್ತೋಲೆಯನ್ವಯ 2019-20ನೇ ಸಾಲಿನಲ್ಲಿ ವಿತರಣೆಯಾಗಿರುವ ವಿದ್ಯಾರ್ಥಿಗಳ ಬಸ್ ಪಾಸುಗಳನ್ನು ದಿನಾಂಕ: 31.12.2020 ರವರೆಗೆ ನಿಗಮದ ಬಸ್ಸುಗಳಲ್ಲಿ ಮಾನ್ಯ ಮಾಡಲು ಕ್ರಮಕೈಗೊಳ್ಳಲಾಗಿತ್ತು.

ಮುಂದುವರೆದು, ದಿನಾಂಕ: 01.01.2021 ರಿಂದ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ವಿದ್ಯಾರ್ಥಿಗಳಿಗೆ ಶಾಲಾ ಕಾಲೇಜುಗಳು ಪ್ರಾರಂಭವಾಗಿರುವುದರಿಂದ, ಎಲ್ಲಾ ವರ್ಗದ ಶಾಲಾ / ಕಾಲೇಜು ವಿದ್ಯಾರ್ಥಿಗಳು ಕರಾರಸಾ ನಿಗಮದ ಬಸ್ ಪಾಸ್ ಪಡೆಯಲು ಅನುಕೂಲವಾಗುವಂತೆ ಕಳೆದ ವರ್ಷದ (2019-20) ಬಸ್ ಪಾಸ್‌ನೊಂದಿಗೆ ಪ್ರಸ್ತುತ ಸಾಲಿನಲ್ಲಿ **ಶಾಲಾ / ಕಾಲೇಜುಗಳಿಗೆ ಪಾವತಿಸಿರುವ ರಸೀದಿ ಜೊತೆಗೆ ನಿಗಮದ ಬಸ್ಸುಗಳಲ್ಲಿ ಸಂಬಂಧಪಟ್ಟ ಮಾರ್ಗದಲ್ಲಿ ಅಥವಾ ಹೊಸ ವಿಳಾಸದಲ್ಲಿರುವ ಶಾಲಾ / ಕಾಲೇಜುಗಳಿಗೆ ತೆರಳಲು ದಿನಾಂಕ: 31.01.2021 ರವರೆಗೆ ಉಚಿತವಾಗಿ ಪ್ರಯಾಣಿಸಲು ಅನುಮತಿಸಲು ಕ್ರಮ ಕೈಗೊಳ್ಳುವುದು.**

ಪ್ರಸಕ್ತ ವರ್ಷದಲ್ಲಿ ಸೇವಾಸಿಂಧು ಪೋರ್ಟಲ್ ಮೂಲಕ ವಿದ್ಯಾರ್ಥಿ ಬಸ್ ಪಾಸ್ ಪಡೆಯಬೇಕಿರುವುದರಿಂದ ಈ ಬಗ್ಗೆ ತಮ್ಮ ವಿಭಾಗ ವ್ಯಾಪ್ತಿಯ ಶಾಲಾ / ಕಾಲೇಜುಗಳ ಮಕ್ಕಳಿಗೆ ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಿ ಬಸ್ ಪಾಸ್ ಪಡೆಯುವಂತೆ ಅಗತ್ಯ ಸೂಚನೆ / ಮಾರ್ಗದರ್ಶನಗಳನ್ನು ನೀಡಲು ಅಗತ್ಯ ಕ್ರಮ ಕೈಗೊಳ್ಳುವುದು. ಈ ಹಿಂದೆ ನಿರ್ದೇಶಿಸಿರುವಂತೆ ನವೆಂಬರ್-2020 ರಿಂದ 10 ತಿಂಗಳ ಅವಧಿಗೆ ಪಾಸಿನ ಮಾನ್ಯತಾ ಅವಧಿ ಹಾಗೂ ಇತರ ನಿರ್ದೇಶನಗಳು ಮುಂದುವರೆಯಲಿವೆ. ಅವಶ್ಯಕತೆಗೆ ಅನುಗುಣವಾಗಿ ಪಾಸುಗಳ ವಿತರಣೆಗೆ ಹೆಚ್ಚಿನ ಕೌಂಟರ್‌ಗಳನ್ನು ಸ್ಥಾಪಿಸಲು ಕ್ರಮವಹಿಸಲು ತಿಳಿಸಿದೆ.

ಈ ಬಗ್ಗೆ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ತಪ್ಪದೇ ಮಾಹಿತಿ ಒದಗಿಸಲು ಕ್ರಮಕೈಗೊಂಡು ಯಾವುದೇ ದೂರುಗಳಿಗೆ ಅವಕಾಶ ನೀಡದಂತೆ ಕ್ರಮವಹಿಸಲು ಹಾಗೂ ಈ ಸಂಬಂಧ ಅನುಸರಣಾ ವರದಿಯನ್ನು ಕಳುಹಿಸಲು ಕೋರಲಾಗಿದೆ.

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)

✓ಪ್ರತಿಯನ್ನು ವಂದನಾಪೂರ್ವಕವಾಗಿ:

1. ಮಾನ್ಯ ಅಧ್ಯಕ್ಷರು. / ಮಾನ್ಯ ಉಪಾಧ್ಯಕ್ಷರು, ಕರಾರಸಾ ನಿಗಮ, ರವರ ಆಪ್ತ ಕಾರ್ಯದರ್ಶಿಗಳು, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಭ&ಜಾ) / (ಸಿ&ಪ) ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
3. ಮುಖ್ಯ ಸಂಚಾರ ವ್ಯವಸ್ಥಾಪಕರು, ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ, ಕೇಂದ್ರ ಕಛೇರಿ, ಹುಬ್ಬಳ್ಳಿ / ಕಲಬುರ್ಗಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
4. ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ), ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
5. ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
6. ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ರಾ.ರ.ಸಾ. ನಿಗಮ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
7. ಎಲ್ಲಾ ವಿಭಾಗೀಯ ಸಂಚಲನಾಧಿಕಾರಿಗಳು / ತನಿಖಾಧಿಕಾರಿಗಳು ಕ.ರಾ.ರ.ಸಾ. ನಿಗಮ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)